# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ 07 ಬ್ಯಾಟರಾಯನಪುರ ವಾರ್ಡ್ ಸಮಿತಿ ಸಭೆಯ ನಡವಳಿ.

ದಿನಾಂಕ 27.11.2021 ರಂದು ವಾರ್ಡ್ ಕಛೇರಿಯಲ್ಲಿ ಬೆಳ್ಳಿಗೆ 11.00 ಕ್ಕೆ ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಯಿತು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ನಂ.07, ಬ್ಯಾಟರಾಯನಪುರ ವಾರ್ಡ್‌ಗೆ ಮಾನ್ಯ ಆಯುಕ್ತರ ಆದೇಶದಂತೆ ನೋಡಲ್ ಅಧಿಕಾರಿಯಾಗಿ ನಿಯೋಜಿಸಲಾಗಿರುವ ಶ್ರೀ.ಪ್ರಕಾಶ್.ಜಿ ರವರು ಸಭೆಯಲ್ಲಿ ಹಾಜರಿದ್ದು, ಈ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಗಮನ ಹರಿಸಿ, ಕೈಗೊಂಡ ಕ್ರಮದ ಬಗ್ಗೆ ಚರ್ಚಿಸಲಾಯಿತು.

1. **ಘನತ್ಯಾಜ್ಯ ನಿರ್ವಹಣೆ:**
    1. ಘಣತ್ಯಾಜ್ಯಾ ನಿರ್ವಹಣೆಗೆ ಸಂಭಂದಿಸಿದಂತೆ, ದಿನಾಂಕ 22.11.2021 ರಿಂದ ಹೊಸ ಗುತ್ತುಗೆದಾರರಿಗೆ ಕಾರ್ಯಾದೇಶ ನೀಡುವುದಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿರುತ್ತಾರೆ. ಅದರಂತೆ ಪ್ರಸುತ್ತ ರಸ್ತೆ ಬದಿಯಲ್ಲಿ ಬಿದ್ದಿರುವ ಕಸವನ್ನು ತೆರವು ಮಾಡಬೇಕೆಂದು ಸೂಚಿಸಲಾಯಿತು. ಪ್ರತಿ ವಾರವು ಒಂದು ಬ್ಲಾಕ್ ಸ್ಪಾಟ್‌ನ್ನು ಸುಚಿ ಗೊಳಿಸುವ ಕೆಲಸವನ್ನು ನಿರ್ವಹಿಸಬೇಕೆಂದು ಅಭಿಪ್ರಾಯ ಪಟ್ಟಲಾಯಿತು.
    2. ಹೊಸ ಸರ್ವೆ ಪ್ರಕಾರ, ವಾರ್ಡ್ 07 ಕ್ಕೆ ಹೆಚ್ಚುವರಿಯಾಗಿ 15 ಆಟೋ ಟಿಪ್ಪರ್‌ಗಳ ಅವಶ್ಯಕತೆವಿರುವುದಾಗಿ ಆಲೆನ್ ವಾರ್ಡ್ ಸಮಿತಿ ಸದಸ್ಯರು ತಿಳಿಸಿರುತ್ತಾರೆ.
2. ಆರೋಗ್ಯ ಇಲಾಖೆ:
    1. ಅಮೃತಹಳ್ಳಿ ಕೆರೆಯ ಆವರಣದಲ್ಲಿ ಕಲುಷಿತ ನೀರು ನಿಂತಿರುವ ಕಾರಣ ಸೊಳ್ಳೆಗಳ ಕಾಟ ಹೆಚ್ಚಾಗಿರುವುದರಿಂದ, ಓಷದಿಯನ್ನು ಸಿಂಪಡಿಸಿಕೊಡಬೇಕೆಂದು ಮುನಿಸ್ವಾಮಿಗೌಡ ಬಡಾವಣೆಯ ನಿವಾಸಿಗಳು ಮನವಿ ಮಾಡಿರುತ್ತಾರೆ. ಸೂಕ್ತ ಕ್ರಮ ಕೈಗೊಳ್ಳುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.
3. ಕಾಮಗಾರಿ ವಿಭಾಗ:
    2. ನೇತಾಗಿನಗರ 1ನೇ ಮುಖ್ಯ ರಸ್ತೆಯಲ್ಲಿ ನೈರ್ಮಲ್ಯ ತ್ಯಾಜ್ಯ ವಯ ಮ್ಯಾನಹೋಲ್ ಗಳಿಂದ ನೀರು ಉಕ್ಕಿ ಹರಿಯುತ್ತಿದು, ಈ ನೀರು ರಸ್ತೆಯಲ್ಲಾ ನೀರು ನಿಂತು, ಸಾರ್ವಜನಿಕರಿಗೆ ತೊಂದರೆಯಾಗಿರುತ್ತದೆ. ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಅಲ್ಲಿನ ನಿವಾಸಿಗಳು ಮನವಿ ಮಾಡಿರುತ್ತಾರೆ.
    3. ಆರ್ ಆರ್ ಟವರಸ್ ಬಳಿ ಪಕ್ಕದ ನವೇಶನದವರು, ಹೆಚ್ಚಾಗಿ ಮಣ್ಣು ಭರ್ತಿ ಮಾಡಿರುವುದಿಂದ, ಈ ಪ್ರದೇಶದ ಬಾಗದಲ್ಲಿ ರಸ್ತೆಗಳಲ್ಲೇ ನೀರು ನಿಂಉ, ಅಲ್ಲಿನ ನಿವಾಸಿಗಳಿಗೆ ತೊಂದರೆಯಾಗಿರುತ್ತದೆ. ಇದರ ಬಗ್ಗೆ ಸೂಕ್ತ ಕ್ರಮ ಕೆಗೊಳ್ಳುವಂತೆ ಮನವಿ ಮಾಡಿರುತ್ತಾರೆ.

4. ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:
   1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು. ಪಂಪಾ ಬಡಾವಣೇ ಮತ್ತು ಬ್ಯಾಟರಾಯನಪುರ ಅಯ್ಯಪ್ಪ ದೇವಸ್ಥಾನದ ರಸ್ತೆಯಲ್ಲಿ ಬೀದಿ ದೀಪಗಳ ಕೊರತೆವಿರುವುದಾಗಿ ತಿಳಿಸಿರುತ್ತಾರೆ.
   2. ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.
   3. ವಾರ್ಡ್ ಕಛೇರಿಯ ಆವರಣದಲ್ಲಿ ಒಂದು ವಿದ್ಯುತ್ ದೀಪವನ್ನು ಅಳವಡಿಸಬೇಕೆಂದು ತಿಳಿಸಲಾಯಿತು.

5. **ಕಂದಾಯ ವಿಭಾಗ:**
   1. ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಪಾವತಿಯನ್ನು ಬಾಕಿ ಉಳಿಸಿಕೊಂಡಿರುವ ಪ್ರಮುಖ ಸಂಸ್ಥೆಗಳನ್ನು ಗುರುತಿಸಿ ಇವುರುಗಳಿಂದ ಕಂದಾಯವನ್ನು ವಸೂಲಿ ಮಾಡಲು ಸೂಕ್ತ ಕ್ರಮಕೈಗೊಳ್ಳಲುವುದು.

6. **ಜಲಮಂಡಳಿ ವಿಭಾಗ:**
   1. ಮುನಿಸ್ವಾಮೇಗೌಡ ಬಡಾವಣೆಯಲ್ಲಿ ಮತ್ತು ಬ್ಯಾಟರಾಯನಪುರದಲ್ಲಿ ಸ್ಯಾನಿಟರಿ ಚೇಂಬರ್‌ಗಳು ಹೆಚ್ಚಾಗಿ ಮಣ್ಣಿನಿಂದ ತುಂಬಿದ್ದು, ಇವುಗಳನ್ನು ಸುವುಗೊಳಿಸಿಕೊಡಬೇಕೆಂದು ಮನವಿ ಮಾಡಿದರು. ಅದರಂತೆ ರಾಜೇಶ್ ಬಿಡ್ಲುಎಸ್‌ಎಸ್‌ಬಿ ವಿಭಾಗದವರು ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.
   2. ಬ್ಯಾಟರಾಯನಪುರ ಗ್ರಾಂ ಠಾಣದ ಭಾಗದಲ್ಲಿ ಹೊಸದಾಗಿ ಒಳಚರಂಡಿ ಸಂಪರ್ಕವನ್ನು ಕಲ್ಪಿಸಲು ಮನವಿ ಮಾಡಿರುತ್ತಾರೆ.

7. ಅರಣ್ಯ ಇಲಾಖೆ:-
   1. ಅರಣ್ಯ ವಿಭಾಗದವರು ವಾರ್ಡ್ ಸಮಿತಿ ಸಭೆಗೆ ಹಾಜರಾಗಿರುವುದಲ್ಲ. ನೋಡೆಲ್ ಅಧಿಕಾರಿಯವರು ದೂರವಾಣಿ ಮೂಲಕ ಸಂಪರ್ಕಿಸಿ, ಪಂಪಾ ಬಡಾವಣೆ ಮತ್ತು ಅಮೃತನಗರ ಮಾರುತಿ ಪಾರ್ಮ್ ಹತ್ತಿರ ಪೂರ್ಣವಾಗಿ ಒಣಗಿಹೋಗಿರುವ ಮರಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತೆರವುಮಾಡಬೇಕೆಂದು ಸೂಚಿಸಲಾಗಿರುತ್ತದೆ. ಸದರಿ ವಿಷಯ ಬಗ್ಗೆ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಲಾಗಿದೆ.

[signature] .M.D.
ಕಾರ್ಯದರ್ಶಿ
ವಾರ್ಡ್ 07